ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಆರೋಗ್ಯ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

577(644) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕೋವಿಡ್ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಪ್ರಸಕ್ತ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳಿಗೆ ವ್ಯಯವಾದ ಹಣವೆಷ್ಟು; (ಅಂಕಿ ಅಂಶ ಸಹಿತ ಮಾಹಿತಿ ನೀಡುವುದು)

(ಆ) ಖಾಸಗಿ ಆಸ್ಪತ್ರೆಗಳು ಕೋವಿಡ್ ರೋಗಿಗಳಿಗೆ ಸರ್ಕಾರ ರೂಪಿಸಿದ ಬೆಲೆಯ ಮಾನದಂಡವನ್ನು ಮೀರಿ ಹೆಚ್ಚುವರಿ ಶುಲ್ಕ ವಸೂಲಿ ಮಾಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಖಾಸಗಿ ಆಸ್ಪತ್ರೆಗಳ ಕೋವಿಡ್ ಶುಲ್ಕ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕಠಿಣ ಕ್ರಮಗಳಾವುವು; (ವಿವರ ಸಹಿತ ಮಾಹಿತಿ ನೀಡುವುದು)

(ಈ) ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಕೋವಿಡ್ ಕಿಟ್ ಸಮರ್ಪಕವಾಗಿ ಹಂಚಿಕೆಯಾಗಿದೆಯೇ; ಗ್ರಾಮೀಣಾ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕೋವಿಡ್ ಕಿಟ್ ತಲುಪಿದೆಯೇ; (ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಈವರೆಗೆ ಎಷ್ಟು ಕೋವಿಡ್ ಕಿಟ್‌ಗಳನ್ನು ವಿತರಿಸಲಾಗಿದೆ? (ಅಂಕಿ ಅಂಶ ಸಹಿತ ಸಂಪೂರ್ಣ ಮಾಹಿತಿ ನೀಡುವುದು)